**All India Radio: Bangalore**
**National Bulletin In Kannada**
**09.01.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**09.01.2025 13.10 p.m.**
**<><><><>**

ಮುಖ್ಯಾಂಶಗಳು

1. ಪ್ರವಾಸಿ ಭಾರತೀಯ ದಿವಸ್ ಸಮಾವೇಶಕ್ಕೆ ಪ್ರಧಾನಿ ಅಧಿಕೃತ ಚಾಲನೆ
2. ತಿರುಪತಿಯಲ್ಲಿ ಕಾಲ್ತುಳಿತ ದುರಂತ ; ಸಾವು-ನೋವುಗಳಿಗೆ ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಸಂತಾಪ
3. ತಮಿಳುನಾಡಿನಲ್ಲಿ ರಸ್ತೆ ಅಪಘಾತ ನಾಲ್ವರ ಸಾವು
4. ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನ್ಯೂಜಿಲೆಂಡ್ ಆಟಗಾರ ಮಾರ್ಟಿನ್ ಗುಪ್ಟಿಲ್ ನಿವೃತ್ತಿ ಘೋಷಣೆ

<><><><>

ಪ್ರಧಾನಿ ನರೇಂದ್ರ ಮೋದಿ ಒಡಿಶಾದ ಭುವನೇಶ್ವರದಲ್ಲಿಂದು ೧೮ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶವನ್ನು ಔಪಚಾರಿಕವಾಗಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತೀಯ ಅನಿವಾಸಿಗಳು ಜಗತ್ತಿನ ರಾಯಭಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಶ್ಲಾಘಿಸಿದರು. ಅನಿವಾಸಿಗಳು ಸದಾ ಭಾರತದ ರಾಯಭಾರಿಗಳೆಂದು ಪರಿಗಣಿಸಿದ್ದು, ಅವರ ಸಾಧನೆಗಳಿಗೆ ಕೃತಜ್ಞತೆ ಸಲ್ಲಿಸುವುದಾಗಿ ನುಡಿದರು. ವಿಶ್ವದಾದ್ಯಂತ ಅವರಿಂದ ಪಡೆದ ಪ್ರೀತಿ ಹಾಗೂ ಗೌರವ ಅವಿಸ್ಮರಣೀಯವಾಗಿದೆ. ಜಗತ್ತಿನೆಲ್ಲೆಡೆ ಇರುವ ಅನಿವಾಸಿ ಭಾರತೀಯರು ಶ್ರೇಷ್ಠ ಸಾಧನೆ ಮಾಡಿದ್ದಾರೆ. ಅವರ ಸಾಧನೆಗಳು ದೇಶವನ್ನು ಹೆಮ್ಮೆ ಪಡುವಂತೆ ಮಾಡಿವೆ ಎಂದು ಪ್ರಧಾನಿ ಹೇಳಿದರು. ವಿದೇಶಗಳಲ್ಲಿ ನೆಲೆಸಿರುವ ಅನಿವಾಸಿ ಭಾರತೀಯರಿಂದ ಭಾರತದ ಮೌಲ್ಯಗಳ ಗೌರವ ಹೆಚ್ಚಿದೆ. ಕಳೆದ ೧೦ ವರ್ಷಗಳಲ್ಲಿ ಹಲವಾರು ವಿಶ್ವ ನಾಯಕರನ್ನು ಭೇಟಿಯಾದಾಗ ಅವರೆಲ್ಲರೂ ಭಾರತೀಯ ಅನಿವಾಸಿಗಳನ್ನು ಶ್ಲಾಘಿಸಿದ್ದಾರೆ ಎಂದು ಹೇಳಿದರು.

ಭಾರತದ ಪ್ರಜಾಪ್ರಭುತ್ವದ ನೀತಿಯ ಮಹತ್ವವನ್ನು ವಿವರಿಸಿದ ಪ್ರಧಾನಿ ಭಾರತ ಕೇವಲ ಪ್ರಜಾಪ್ರಭುತ್ವದ ತಾಯಿ ಮಾತ್ರವಲ್ಲ, ಪ್ರಜಾಪ್ರಭುತ್ವವು ನಮ್ಮ ಜೀವನ ವಿಧಾನದಲ್ಲಿ ಬೇರೂರಿದೆ ಎಂದು ಹೇಳಿದರು.

ಪ್ರವಾಸಿ ಭಾರತೀಯ ದಿವಸ್ ಸಮಾವೇಶ ಕೇಂದ್ರ ಸರ್ಕಾರದ ಪ್ರಮುಖ ಉಪಕ್ರಮವಾಗಿದ್ದು, ಇದು ಭಾರತೀಯ ಅನಿವಾಸಿಗಳೊಂದಿಗೆ ಸಂಪರ್ಕ ಸಾಧಿಸಲು, ತೊಡಗಿಸಿಕೊಳ್ಳಲು ಮತ್ತು ಪರಸ್ಪರ ಸಂವಹನ ನಡೆಸಲು ಪ್ರಮುಖ ವೇದಿಕೆಯನ್ನು ಒದಗಿಸುತ್ತದೆ. ಮೂರು ದಿನಗಳ ಪ್ರವಾಸಿ ಭಾರತೀಯ ದಿವಸ್ ನಿನ್ನೆ ಯುವ ಪ್ರವಾಸಿ ಭಾರತೀಯ ದಿವಸ್ ಉದ್ಘಾಟನೆಯೊಂದಿಗೆ ಪ್ರಾರಂಭಗೊಂಡಿತು. ಈ ವರ್ಷದ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ವಿಷಯ 'ವಿಕಸಿತ ಭಾರತಕ್ಕೆ ಭಾರತೀಯ ಅನಿವಾಸಿಗಳ ಕೊಡುಗೆ' ಎಂಬುದಾಗಿದೆ. ಹಲವಾರು ದೇಶಗಳ ಹೆಚ್ಚಿನ ಸಂಖ್ಯೆಯ ಅನಿವಾಸಿ ಭಾರತೀಯರು ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ. ಕೇಂದ್ರ ಸಚಿವರಾದ ಡಾ. ಎಸ್. ಜೈಶಂಕರ್, ಅಶ್ವಿನಿ ವೈಷ್ಣವ್, ಜ್ಯೂಲ್ ಓರಾಂ ಹಾಗೂ ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಸೇರಿದಂತೆ ಹಲವು ಗಣ್ಯರು ಸಮಾವೇಶದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಭಾರತೀಯ ಅನಿವಾಸಿಗಳಿಗಾಗಿ ವಿಶೇಷ ಪ್ರವಾಸಿ ರೈಲು 'ಪ್ರವಾಸಿ ಭಾರತೀಯ ಎಕ್ಸ್‌ಪ್ರೆಸ್' ಉದ್ಘಾಟನಾ ಪ್ರಯಾಣಕ್ಕೆ ವರ್ಚುವಲ್ ಮೂಲಕ ಹಸಿರು ನಿಶಾನೆ ತೋರಿಸಿದರು. ಪ್ರವಾಸಿ ತೀರ್ಥ ದರ್ಶನ ಯೋಜನೆಯಡಿ ಚಲಿಸಲಿರುವ ಈ ರೈಲು ದೆಹಲಿಯ ನಿಜಾಮುದ್ದೀನ್ ರೈಲು ನಿಲ್ದಾಣದಿಂದ ಹೊರಡಲಿದ್ದು, ೩ ವಾರಗಳ ಕಾಲ ಭಾರತದ ಪ್ರವಾಸೋದ್ಯಮ ಹಾಗೂ ಧಾರ್ಮಿಕ ಪ್ರಾಮುಖ್ಯತೆಯ ಬಹುಸ್ಥಳಗಳಿಗೆ ಪ್ರಯಾಣಿಸಲಿದೆ. ಸಮಾರಂಭದಲ್ಲಿ ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ದೇಶ ವಿಕಸಿತ ಭಾರತದತ್ತ ಪಯಣ ಆರಂಭಿಸಿದೆ. ಜಾಗತಿಕವಾಗಿ ಭಾರತದ ಬಗ್ಗೆ ಗ್ರಹಿಕೆ ಹೆಚ್ಚಿಸುವಲ್ಲಿ ಯುವ ಅನಿವಾಸಿ ಭಾರತೀಯರ ಪಾತ್ರವನ್ನು ದೇಶ ಗುರುತಿಸುತ್ತದೆ ಎಂದು ಹೇಳಿದರು. ಜಾಗತೀಕರಣಗೊಂಡ ಯುಗದಲ್ಲಿ ಅನಿವಾಸಿ ಭಾರತೀಯರು ಪ್ರತಿವರ್ಷವೂ ಹೆಚ್ಚು ಮಹತ್ವದ ಪಾತ್ರ ವಹಿಸುತ್ತಿದ್ದಾರೆ.

ತಂತ್ರಜ್ಞಾನ, ಪ್ರವಾಸೋದ್ಯಮ, ವ್ಯಾಪಾರ ಅಥವಾ ಹೂಡಿಕೆ ಸೇರಿದಂತೆ ಎಲ್ಲ ವಲಯಗಳಲ್ಲಿ ದ್ವಿಮುಖ ಹರಿವುಗಳು ಅಮೂಲ್ಯವಾದವು ಎಂದು ಹೇಳಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ವಿವಿಧ ಕ್ಷೇತ್ರದಲ್ಲಿನ ಸಾಧನೆಗಳನ್ನು ಗುರುತಿಸಿ ಭಾರತೀಯ ಅನಿವಾಸಿ ಸದಸ್ಯರಿಗೆ ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ.

<><><><>

ಆಂಧ್ರಪ್ರದೇಶದ ಸುಪ್ರಸಿದ್ಧ ತೀರ್ಥಕ್ಷೇತ್ರ ತಿರುಪತಿ-ತಿರುಮಲದಲ್ಲಿ ನಾಳೆಯಿಂದ ಆರಂಭಗೊಳ್ಳಲಿರುವ ವೈಕುಂಠ ಏಕಾದಶಿ ದರ್ಶನಕ್ಕಾಗಿ ತಿರುಪತಿ ಪಟ್ಟಣದ ಟೋಕನ್ ವಿತರಿಸುವ ಕೌಂಟರ್‌ನಲ್ಲಿ ನಿನ್ನೆ ಸಂಭವಿಸಿದ ಕಾಲ್ತುಳಿತದಲ್ಲಿ ಆರು ಜನರು ಸಾವನ್ನಪ್ಪಿದ್ದು, ೪೦ ಜನರು ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ. ಘಟನೆ ತಿರುಪತಿ ಪಟ್ಟಣದಲ್ಲಿ ನಡೆದಿದ್ದು, ದೇವಾಲಯವಿರುವ ಬೆಟ್ಟದ ಮೇಲಿರುವ ತಿರುಮಲದಲ್ಲಿ ಅಲ್ಲ. ವೈಕುಂಠ ಏಕಾದಶಿ ಅಂಗವಾಗಿ ವೈಕುಂಠದ ದ್ವಾರದ ಮೂಲಕ ದರ್ಶನ ಪಡೆಯುವುದನ್ನು ಅತ್ಯಂತ ಶುಭವೆಂದು ಭಕ್ತರು ಪರಿಗಣಿಸುತ್ತಾರೆ. ತಿರುಮಲ ತಿರುಪತಿ ದೇವಸ್ಥಾನ-ಟಿಟಿಡಿ ತಿರುಪತಿ ಪಟ್ಟಣದ ಮೂರು ಸ್ಥಳಗಳಲ್ಲಿ ೧ ಲಕ್ಷ ೨೦ ಸಾವಿರ ಟೋಕನ್‌ಗಳನ್ನು ವಿತರಿಸಲು ೯೪ ಕೌಂಟರ್‌ಗಳನ್ನು ಆಯೋಜಿಸಿದೆ. ರಾಮನಾಯ್ಡು ಶಾಲೆಯ ಬಳಿ ಸ್ಥಾಪಿಸಲಾಗಿರುವ ಟೋಕನ್ ಕೌಂಟರ್‌ನಲ್ಲಿ ಕಾಲ್ತುಳಿತ ಸಂಭವಿಸಿದೆ. ಘಟನೆಯಲ್ಲಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರನ್ನು ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಇಂದು ಭೇಟಿಯಾಗಲಿದ್ದಾರೆ.

ತಿರುಪತಿಯಲ್ಲಿ ನಡೆದ ಕಾಲ್ತುಳಿತ ದುರಂತದಲ್ಲಿನ ಸಾವು-ನೋವುಗಳ ಬಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ಅವರು, ಗಾಯಗೊಂಡವರು ತ್ವರಿತವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ. ಈ ನಡುವೆ ತಿರುಪತಿಯಲ್ಲಿ ಸಂಭವಿಸಿದ ಕಾಲ್ತುಳಿತ ಘಟನೆಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಮೃತಪಟ್ಟ ಕುಟುಂಬಗಳಿಗೆ ಸಂತಾಪ ವ್ಯಕ್ತಪಡಿಸಿ, ಗಾಯಗೊಂಡವರು ತ್ವರಿತವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ. ಘಟನೆಯಲ್ಲಿ ತೊಂದರೆಗೊಳಗಾದವರಿಗೆ ರಾಜ್ಯ ಸರ್ಕಾರ ಸಾಧ್ಯವಿರುವ ಎಲ್ಲ ನೆರವು ಕಲ್ಪಿಸಲಿದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದಿನಿಂದ ಮೇಘಾಲಯ ಮತ್ತು ಒಡಿಶಾಗೆ ಭೇಟಿ ನೀಡಲಿದ್ದಾರೆ. ಮೇಘಾಲಯದ ಉಮಿಯಮ್‌ನಲ್ಲಿ ಈಶಾನ್ಯ ಗುಡ್ಡಗಳ ಪ್ರದೇಶಕ್ಕಾಗಿ ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಸಂಶೋಧನಾ ಸಂಕೀರ್ಣದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಒಡಿಶಾದ ಭುವನೇಶ್ವರದಲ್ಲಿ ೧೮ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಹಾಗೂ ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

<><><><>

ತಮಿಳುನಾಡಿನ ರಾಣಿಪೇಟ್ ಬಳಿ ಇಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್‌ಗೆ ಟ್ರಕ್‌ವೊಂದು ಢಿಕ್ಕಿಯಾಗಿ ನಾಲ್ವರು ಸಾವನ್ನಪ್ಪಿದ್ದು, ೩೦ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಮೂವರ ಪರಿಸ್ಥಿತಿ ಚಿಂತಾಜನಕವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಸ್‌ನ ಮುಂಭಾಗ ಸಂಪೂರ್ಣವಾಗಿ ಜಖಂ ಗೊಂಡಿದ್ದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆ ನಂತರ ಕುಟುಂಬಸ್ಥರಿಗೆ ಹಸ್ತಾಂತರಿಸಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ಸಾಗರೋತ್ತರ ಭಾರತೀಯ ಸಮುದಾಯಗಳೊಂದಿಗಿನ ಸಂಬಂಧವನ್ನು ಪ್ರಧಾನಿ ನರೇಂದ್ರ ಮೋದಿ ಪುನರ್ ವ್ಯಾಖ್ಯಾನಿಸಿದ್ದಾರೆ. ಅವರನ್ನು ದೇಶದ ಜಾಗತಿಕ ಚಿತ್ರಣ ಮತ್ತು ಅಭಿವೃದ್ಧಿಯಲ್ಲಿ ಅವಿಭಾಜ್ಯವನ್ನಾಗಿಸಿದ್ದಾರೆ

ಎಂದು ಭಾರತೀಯ ಅಮೆರಿಕ ಸಮುದಾಯದ ಪ್ರತಿಷ್ಠಾನದ ಅಧ್ಯಕ್ಷ ಡಾ. ಭಾರತ್ ಬರೈ ಅವರು, ರಾಷ್ಟ್ರೀಯ ದಿನಪತ್ರಿಕೆಯೊಂದರಲ್ಲಿ ಬರೆದಿರುವ ಅಂಕಣದಲ್ಲಿ ವಿವರಿಸಿದ್ದಾರೆ. ಅಮೆರಿಕದ ಹ್ಯೂಸ್ಟನ್‌ನಲ್ಲಿ ನಡೆದ ಹೌಡಿ ಮೋದಿ ಹಾಗೂ ಕುವೈತ್‌ನಲ್ಲಿ ನಡೆದ ಹಲಾ ಮೋದಿ ಸೇರಿದಂತೆ ವಿವಿಧ ಖಂಡಗಳಲ್ಲಿ ನಡೆದ ಕಾರ್ಯಕ್ರಮಗಳಲ್ಲಿ ಪ್ರಧಾನಿ ಮೋದಿ ಅನಿವಾಸಿ ಭಾರತೀಯರು ಹಾಗೂ ಭಾರತೀಯ ಮೂಲದ ವ್ಯಕ್ತಿಗಳ ಜೊತೆಗಿನ ವೈಯಕ್ತಿಕ ಸಂಬಂಧವನ್ನು ಎತ್ತಿ ತೋರಿಸಿವೆ ಎಂದು ಡಾ. ಬರೈ ವಿವರಿಸಿದ್ದಾರೆ. ಒಡಿಶಾದಲ್ಲಿ ನಡೆಯುತ್ತಿರುವ ಪ್ರವಾಸಿ ಭಾರತೀಯ ದಿವಸ್ ದಲ್ಲಿ ಮೋದಿ ಅವರ ಅನಿವಾಸಿ ಭಾರತೀಯರ ಸಾಧನೆಗಳ ಕುರಿತು ಸಂಭ್ರಮ ಪಡಲು ಅತ್ಯುನ್ನತ ವೇದಿಕೆಯಾಗಿದೆ ಎಂದು ಅವರು ಬಣ್ಣಿಸಿದ್ದಾರೆ.

<><><><>

ಜಮ್ಮು ಕಾಶ್ಮೀರದ ಕತ್ರಾದಿಂದ ಶ್ರೀನಗರಕ್ಕೆ ಹೋಗುವ ಜಮ್ಮು ಶ್ರೀನಗರ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಶೀಘ್ರದಲ್ಲೇ ಸಂಚಾರ ಆರಂಭಿಸಲಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.  ಈ ರೈಲು ಎಂಟು ಬೋಗಿಗಳನ್ನು ಹೊಂದಿದ್ದು, ಕೇವಲ ಮೂರು ಗಂಟೆ ಹತ್ತು ನಿಮಿಷಗಳ ಪ್ರಯಾಣ ಒಳಗೊಂಡಿದೆ. ಹೊಸದಾಗಿ ನಿರ್ಮಿಸಲಾದ ಜಮ್ಮು ವಿಭಾಗದಲ್ಲಿ ೧೧೧ ಕಿಲೋಮೀಟರ್ ಉದ್ದದ ಬನಿಹಾಲ್-ಕತ್ರಾ ವಿಭಾಗದ ಅಂತಿಮ ಸುರಕ್ಷತಾ ಪರಿಶೀಲನೆ ಕಾರ್ಯ ಪ್ರಾರಂಭವಾಗಿದೆ ಮತ್ತು ಈ ವರ್ಷದ ಕೊನೆಯಲ್ಲಿ ರೈಲುಗಳ  ಸಂಚರಿಸುವ  ನಿರೀಕ್ಷೆಯಿದೆ. ೮ ಪ್ಲಾಟ್‌ಫಾರ್ಮ್‌ಗಳು ಮತ್ತು ಆಧುನಿಕ ಸೌಕರ್ಯಗಳೊಂದಿಗೆ ಜಮ್ಮು ನಿಲ್ದಾಣವನ್ನು ವಿನ್ಯಾಸಗೊಳಿಸಲಾಗಿದೆ  ಎಂದು ಸಚಿವಾಲಯ ತಿಳಿಸಿದೆ.

<><><><>

ನ್ಯೂಜಿಲೆಂಡ್ ಕ್ರಿಕೆಟ್ ಆಟಗಾರ ಮಾರ್ಟಿನ್ ಗುಪ್ಟಿಲ್ ತಮ್ಮ ೩೮ನೇ ವಯಸ್ಸಿನಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಸುಮಾರು ೧೪ ವರ್ಷಗಳ ಕಾಲ ಕ್ರಿಕೆಟ್ ವೃತ್ತಿ ಜೀವನದಲ್ಲಿ ಗುಪ್ಟಿಲ್ ೩೬೭ ಪಂದ್ಯಗಳಲ್ಲಿ ಆಡಿ ೧೪ ಸಾವಿರಕ್ಕೂ ಹೆಚ್ಚು ರನ್‌ಗಳನ್ನು ಗಳಿಸಿದ್ದಾರೆ. ೨೩ ಅಂತಾರಾಷ್ಟ್ರೀಯ ಶತಕಗಳನ್ನು ಬಾರಿಸಿದ್ದಾರೆ. ಅವರು ೧೯೮ ಏಕದಿನ, ೧೨೨ ಟಿ-೨೦ ಹಾಗೂ ೪೭ ಟೆಸ್ಟ್ ಪಂದ್ಯಗಳನ್ನು ಆಡಿದ್ದು, ೨೦೦೯ ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ನಡೆದ ಪಂದ್ಯದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದರು. ನಿವೃತ್ತಿಯ ನಂತರ ದೇಶೀಯ ಪಂದ್ಯಗಳಲ್ಲಿ ಆಡುವುದು ತಮ್ಮ ಕನಸಾಗಿದೆ ಎಂದು ಹೇಳಿದ್ದಾರೆ. ತಮ್ಮ ದೇಶದ ಪರ ಆಡಿದ್ದಾಕ್ಕಾಗಿ ಹೆಚ್ಚಿನ ಸಂತೋಷವಾಗಿದ್ದು, ತಾನೊಬ್ಬ ಅದೃಷ್ಟಶಾಲಿ ಎಂಬ ಹೆಮ್ಮೆ ಇದೆ ಎಂದು ಹೇಳಿಕೊಂಡಿದ್ದಾರೆ. ಏಕದಿನ ಪಂದ್ಯಗಳ ವಿಶ್ವಕಪ್‌ನಲ್ಲಿ ಅತಿ ಹೆಚ್ಚಿನ ವೈಯಕ್ತಿಕ ಸ್ಕೋರ್ ದಾಖಲಿಸಿರುವ ಹೆಗ್ಗಳಿಕೆಗೆ ಅವರು ಪಾತ್ರರಾಗಿದ್ದಾರೆ. ೨೦೧೫ರ ವಿಶ್ವಕಪ್‌ನಲ್ಲಿ ಗುಪ್ಟಿಲ್ ೧೬೩ ಎಸೆತಗಳಲ್ಲಿ ಔಟಾಗದೇ ೨೩೭ ಇನ್ನಿಂಗ್ಸ್ ಆಡಿದ್ದರು. ಇದು ಏಕದಿನ ಕ್ರಿಕೆಟ್‌ನಲ್ಲಿ ನ್ಯೂಜಿಲೆಂಡ್ ಬ್ಯಾಟ್ಸ್‌ಮನ್ ಒಬ್ಬರು ಗಳಿಸಿದ ಅತ್ಯಂತ ವ್ಯಕ್ತಿಗತ ದಾಖಲೆಯಾಗಿದೆ. ನ್ಯೂಜಿಲೆಂಡ್ ಪರವಾಗಿ ಟಿ-೨೦ ಪಂದ್ಯಗಳಲ್ಲೂ ಸಹ ಹೆಚ್ಚು ರನ್‌ಗಳಿಸಿದ ಆಟಗಾರರಾಗಿದ್ದಾರೆ. ಇದರಲ್ಲಿ ೨ ಶತಕಗಳು, ೨೦ ಅರ್ಧ ಶತಕಗಳು ಸೇರಿವೆ.

<><><><>

ಇಂಡಿಯನ್ ಸೂಪರ್ ಲೀಗ್‌ನಲ್ಲಿ, ಚೆನ್ನೈಯಿನ ಎಫ್‌ಸಿ ಇಂದು ಚೆನ್ನೈನಲ್ಲಿ ಒಡಿಶಾವನ್ನು ಎದುರಿಸಲಿದೆ. ಪಂದ್ಯವು ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ.  ಕಳೆದ ವರ್ಷದ ಪಂದ್ಯದಲ್ಲಿ ೩-೨ ಅಂತರದ ಗೆಲುವು ಸಾಧಿಸಿದ್ದ ಚೆನ್ನೈ, ಒಡಿಶಾ ವಿರುದ್ಧ ತನ್ನ ಯಶಸ್ಸನ್ನು ವಿಸ್ತರಿಸಲು ಪ್ರಯತ್ನಿಸುತ್ತಿದೆ. ಮತ್ತೊಂದೆಡೆ, ಒಡಿಶಾ ಎಫ್‌ಸಿ, ಗೋವಾ ಎಫ್‌ಸಿ ವಿರುದ್ಧದ ಇತ್ತೀಚಿನ ಸೋಲಿನಿಂದ ಚೇತರಿಸಿಕೊಳ್ಳಲು ಸಜ್ಜಾಗಿದೆ.  ಪ್ರಸ್ತುತ ಐಎಸ್‌ಎಲ್ ಅಂಕಪಟ್ಟಿಯಲ್ಲಿ, ಚೆನ್ನೈಯಿನ ಎಫ್‌ಸಿ ೧೫ ಅಂಕಗಳೊಂದಿಗೆ ೧೦ನೇ ಸ್ಥಾನದಲ್ಲಿದ್ದರೆ, ಒಡಿಶಾ ಎಫ್‌ಸಿ ೨೦ ಅಂಕಗಳೊಂದಿಗೆ ೭ನೇ ಸ್ಥಾನದಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>